# 2,300 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ



**ಉದಯಕಾಲ ನ್ಯೂಸ್, ಬೆಂಗಳೂರು:**

ಸೆಂಟ್ ಜೋಸೆಫ್ಸ್ ವಿಶ್ವವಿದ್ಯಾಲಯದ ಮೂರನೇ ವಾರ್ಷಿಕ ಘಟಿಕೋತ್ಸವ ಭಾನುವಾರ ನಡೆದಿದ್ದು, ವಿವಿಧ ಪದವಿ ಹಾಗೂ ಸ್ನಾತಕೋತ್ತರ ಕಾರ್ಯಕ್ರಮಗಳ ಸುಮಾರು 2,300 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಫೇರ್‌ಫ್ಯಾಕ್ಸ್ ಫೈನಾನ್ಷಿಯಲ್ ಹೋಲ್ಡಿಂಗ್ಸ್ ಲಿಮಿಟೆಡ್‌ನ ಸಂಸ್ಥಾಪಕ ಹಾಗೂ ಸಿಇಒ ಪ್ರೇಮ್ ವಾತ್ಸಾ ಭಾಗವಹಿಸಿದ್ದರು. ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ರಾಜ್ಯಸಭಾ ಸದಸ್ಯ ಮನ್ಸೂರ್ ಅಲಿ ಖಾನ್ ಗೌರವ ಅತಿಥಿಗಳಾಗಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪ್ರೇಮ್ ವಾತ್ಸಾ ಅವರು ವಿಶ್ವವಿದ್ಯಾಲಯಕ್ಕೆ ಸುಮಾರು 5 ಮಿಲಿಯನ್ ಅಮೆರಿಕನ್ ಡಾಲರ್‌ಗಳ ಬೆಂಬಲ ಘೋಷಿಸಿದರು. ಪ್ರಿಯಾಂಕ್ ಖರ್ಗೆ ಅವರು ವಿದ್ಯಾರ್ಥಿಗಳು ವೈಫಲ್ಯಗಳಿಂದ ಕಲಿತು ಗುರಿಯತ್ತ ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಮನ್ಸೂರ್ ಆಲಿ ಖಾನ್ ಅವರು ಪ್ರಶ್ನಿಸುವ ಮನೋಭಾವ ಬೆಳೆಸಿಕೊಂಡು ಹೊಸ ಕೌಶಲ್ಯಗಳನ್ನು ಕಲಿಯಬೇಕು ಹಾಗೂ ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತವಾಗಿ ಬಳಸಬೇಕು ಎಂದರು. ಘಟಿಕೋತ್ಸವದಲ್ಲಿ ಶೈಕ್ಷಣಿಕ ಸಾಧನೆ ಮಾಡಿದ 123 ವಿದ್ಯಾರ್ಥಿಗಳಿಗೆ ಪದಕಗಳನ್ನು ಪ್ರದಾನ ಮಾಡಲಾಯಿತು. ಒಟ್ಟು 47 ಪದವಿ, 22 ಸ್ನಾತಕೋತ್ತರ ಹಾಗೂ ನಾಲ್ಕು ಇತರ ಚಿನ್ನದ ಪದಕಗಳು ಮತ್ತು 46 ಪದವಿ ಹಾಗೂ 22 ಸ್ನಾತಕೋತ್ತರ ಬೆಳ್ಳಿ ಪದಕಗಳನ್ನು ನೀಡಲಾಯಿತು.